# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5ಜಿ)ಪಿಆರ್/206/2009–10
2016–17

ಆಯುಕ್ತರವರ ಕಛೇರಿ
ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 16/3/17

## ಕಛೇರಿ ಆದೇಶ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿ ಮತ್ತು ನೌಕರರಿಗೆ ಹೆಚ್ಚುವರಿ ಗಳಿಕೆ ರಜೆ ಅಧ್ಯರ್ಪಣೆ ನಗದೀಕರಣಕ್ಕಾಗಿ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆರ್ಥಿಕ ಇಲಾಖೆಯ ಆದೇಶದ ಸಂಖ್ಯೆ: ಆಇ 10 ಸೇನಿಸೇ 2016 ಬೆಂಗಳೂರು, ದಿನಾಂಕ: 12–12–2016.
2) ಉಪ ನಿಯಂತ್ರಕರು (ಹಣಕಾಸು) ರವರ ವರದಿ ದಿನಾಂಕ: 02–03–2017.
3) ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ವಿಷಯದ ಸಂಖ್ಯೆ:ತೆಆಸ್ಥಾಸ/95/2016–17, ದಿನಾಂಕ: 09–01–2017.

********

ಕರ್ನಾಟಕ ಸರ್ಕಾರವು ಉಲ್ಲೇಖ–(1)ರ ಆದೇಶದಲ್ಲಿ 2017ನೇ ಸಾಲಿನ ಅವಧಿಗೆ ಗರಿಷ್ಟ 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅದ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗದೀಕರಣ ಸೌಲಭ್ಯ ಪಡೆಯುವ ಯೋಜನೆಯನ್ನು ದಿನಾಂಕ: 01/01/2017 ರಿಂದ ಜಾರಿಗೊಳಿಸಿ ಈ ಕೆಳಕಂಡಂತೆ ನಿಯತಗೊಳಿಸಲಾಗಿದೆ.

| ಕ್ರಮ ಸಂಖ್ಯೆ | ಅಧಿಕಾರಿ/ನೌಕರರ ಸಮೂಹ | ಮುಂಚಿತವಾಗಿ ಒಂದು ತಿಂಗಳ ನೋಟೀಸ್ ನೀಡಿ 2017 ನೇ ಸಾಲಿನ ಅವಧಿಗೆ ನಗದೀಕರಣ ಸೌಲಭ್ಯ ಪಡೆಯುವ ಅವಧಿ |
|---|---|---|
| 1. | ಗ್ರೂಪ್'ಡಿ' ಸಮೂಹ | ಅವರ ಇಚ್ಛೆಯಂತೆ 2017ರ ಕ್ಯಾಲೆಂಡರ್ ವರ್ಷದ ಯಾವುದೇ ತಿಂಗಳಿನಲ್ಲಿ |
| 2. | ಉಳಿದ ಸಮೂಹ (ಎ, ಬಿ, ಸಿ) | ಅವರ ಇಚ್ಛೆಯಂತೆ ಏಪ್ರಿಲ್ 2017 ರಿಂದ ಡಿಸೆಂಬರ್ 2017ರ ವರೆಗಿನ ಯಾವುದೇ ತಿಂಗಳಿನಲ್ಲಿ |

2. ಮೇಲೆ ವಿಧಿಸಿದ ನಿಬಂಧನೆಯು ಏನೇ ಇದ್ದಾಗ್ಯೂ ಜನವರಿ 2017 ರಿಂದ ಮಾರ್ಚ್ 2017ರಲ್ಲಿ ನಿವೃತ್ತಿ ಹೊಂದುವ ಎಲ್ಲಾ ಅರ್ಹ ನೌಕರರು /ಅಧಿಕಾರಿಗಳು, ಅವರು ನಿವೃತ್ತಿ ಹೊಂದುವ ತಿಂಗಳಲ್ಲಿ ನಗದೀಕರಣ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ.

3. ಗೆಜೆಟೆಡ್ ಅಧಿಕಾರಿಗಳ ಸಂಬಂಧದಲ್ಲಿ 2017ನೇ ಸಾಲಿನ ಗಳಿಕೆ ರಜೆ ನಗದೀಕರಣ ಸೌಲಭ್ಯ ಲೆಕ್ಕಚಾರದ ಉದ್ದೇಶಕ್ಕಾಗಿ ಮಾತ್ರ, ಹೆಚ್‌ಆರ್‌ಎಮ್‌ಎಸ್ ನಲ್ಲಿ ಲಭ್ಯವಿರುವ ಅಧಿಕಾರಿಗಳ ಗಳಿಕೆ ರಜೆ

ಮ.ತಿ.ನೋ..2

ಲೆಕ್ಕಚಾರದ ಆಧಾರದ ಮೇಲೆ ನಗದೀಕರಣವನ್ನು ಮಂಜೂರು ಮಾಡಲು ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರಿಗಳು ಕ್ರಮ ವಹಿಸತಕ್ಕದ್ದು ಮತ್ತು ಮಹಾಲೇಖಪಾಲರು ಲೆಕ್ಕಚಾರದ ಬಗ್ಗೆ ಯಾವುದೇ ವ್ಯತ್ಯಾಸವನ್ನು ತಿಳಿಸಿದಲ್ಲಿ ಅದನ್ನು ಸರಿಪಡಿಸುವ ಮತ್ತು ಅದರನ್ವಯ ಆರ್ಥಿಕ ಸೌಲಭ್ಯಗಳಿಗೆ ಮಾತ್ರ ಅರ್ಹವಾಗುವ ಷರತ್ತಿಗೊಳಪಡಿಸಿ ಮಂಜೂರು ಮಾಡತಕ್ಕದ್ದು.

3. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 118 ರಲ್ಲಿ ನಿಯಮಿಸಿರುವಂತಹ ಗಳಿಕೆ ರಜೆ ನಗದೀಕರಣ ನಿಯಂತ್ರಣಕ್ಕೆ ಸಂಬಂಧಿಸಿದ ಇತರೆ ಷರತ್ತುಗಳು ಅನ್ವಯವಾಗುತ್ತದೆ.

4. ಈ ಆದೇಶವು ಈಗಾಗಲೇ ಈ ಸೌಲಭ್ಯ ವಿಸ್ತರಣೆಯಾಗಿರುವ ಸರ್ಕಾರದಿಂದ ಸಹಾನುದಾನ ಪಡೆಯುತ್ತಿರುವ ಸಂಸ್ಥೆಗಳ ನೌಕರರಿಗೂ ಅನ್ವಯಿಸುತ್ತದೆ.

ಮೇಲ್ಕಂಡ ಸರ್ಕಾರದ ಉಲ್ಲೇಖ-(1)ರ ಆದೇಶವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಳವಡಿಸಿಕೊಳ್ಳುವ ಸಂಬಂಧ ಪಾಲಿಕೆಯ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ಮುಂದೆ ಮಂಡಿಸಲಾದ ಟಿಪ್ಪಣಿಗೆ ದಿನಾಂಕ:09-01-2017 ರಂದು ನಡೆದ ಸಮಿತಿ ಸಭೆಯಲ್ಲಿ ಘನ ಸರ್ಕಾರವು ಇನ್ನು ಮುಂದೆ ಆಯಾ ಕಾಲಘಟ್ಟಗಳಿಗೆ ತಕ್ಕಂತೆ ನೀಡುವ ಆದೇಶದ ಅನ್ವಯ, ತುಟ್ಟಿಭತ್ಯೆ, ಗಳಿಕೆ ರಜೆ, ವೇತನ ಆಯೋಗದ ಶಿಫಾರಸ್ಸುಗಳು ಹಾಗೂ ಇನ್ನಿತರೆ ಶಾಸನಬದ್ಧ (Statutory) ಆರ್ಥಿಕ ಸೌಲಭ್ಯಗಳನ್ನು ಸರ್ಕಾರಿ ಆದೇಶದ ರೀತ್ಯ ಜಾರಿಗೊಳಿಸಿ, ತದ ನಂತರ ಸ್ಥಿರೀಕರಣಕ್ಕಾಗಿ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ಮುಂದೆ ಮಂಡಿಸಲು ಉಲ್ಲೇಖ-(3)ರಲ್ಲಿ ತೀರ್ಮಾನಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಪಾಲಿಕೆಯ ಎಲ್ಲಾ ಬಟವಾಡೆ ಅಧಿಕಾರಿಗಳು ಮೇಲ್ಕಂಡ ಉಲ್ಲೇಖ-(1)ರ ಸರ್ಕಾರದ ಆದೇಶದಂತೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

ಮಾನ್ಯ ಆಯುಕ್ತರವರ ಆದೇಶದಂತೆ}

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:** ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.

: ಮಾನ್ಯ ಉಪ ಮಹಾಪೌರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.

: ಮಾನ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.

: ಮಾನ್ಯ ವಿಶೇಷ ಆಯುಕ್ತರು (ಯೋಜನೆ)/(ಹಣಕಾಸು)/(ಕಲ್ಯಾಣ)/(ಘನತ್ಯಾಜ್ಯ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಮಾನ್ಯ ಅಪರ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಎಲ್ಲಾ ವಲಯ ಅಪರ/ಜಂಟಿ ಆಯುಕ್ತರು ರವರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

: ಅಧ್ಯಕ್ಷರು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಅಧ್ಯಕ್ಷರು, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ, ಮಾನ್ಯ ಆಡಳಿತ ಪಕ್ಷದ ನಾಯಕರು, ಮಾನ್ಯ ವಿರೋಧ ಪಕ್ಷದ ನಾಯಕರುಗಳು ಹಾಗೂ ಪಾಲಿಕೆಯ ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳ ಅವಗಾಹನೆಗೆ ತರಲು ಕೋರಿದೆ.

: ಮು.ಲೆ.ಅ / ಮು.ಲೆ.ಪ / ಉ.ನಿ. (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.

; ಸಹಾಯಕ ಆಯುಕ್ತರು (ಆಡಳಿತ 1 ಮತ್ತು 2) ರವರಿಗೆ ಕಳುಹಿಸಿದೆ.

: ಎಲ್ಲಾ ವಲಯ ಸಹಾಯಕ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.

: ಎಲ್ಲಾ ವಲಯ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

: ಅಧ್ಯಕ್ಷರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ/ನೌಕರರ ಸಂಘ ರವರಿಗೆ ಕಳುಹಿಸಿದೆ.

: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೌರಕಾರ್ಮಿಕರ ಮತ್ತು ಗ್ಯಾಂಗ್‌ಮೆನ್ ಸಂಘ ರವರಿಗೆ ಕಳುಹಿಸಿದೆ.

: ಕಛೇರಿ ಕಡತಕ್ಕೆ.